**Akashvani : Bangalore**
**National Bulletin In Kannada**
**22.06.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**22.06.2024 / 19.35 hrs**

**<><*<><>*><>**

ಮುಖ್ಯಾಂಶಗಳು

೧. ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಒಪ್ಪಂದಗಳಿಗೆ ಭಾರತ ಮತ್ತು ಬಾಂಗ್ಲಾದೇಶ ಪರಸ್ಪರ ಸಹಿ

೨. ಎನ್‌ಟಿಎ ಕಾರ್ಯನಿರ್ವಹಣೆ ಪರಿಶೀಲನೆಗೆ ಇಸ್ರೋ ಮಾಜಿ ಅಧ್ಯಕ್ಷ ಡಾ.ಕೆ.ರಾಧಾಕೃಷ್ಣನ್ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚನೆ

೩. ಸೋಮವಾರದಿಂದ ೧೮ನೇ ಲೋಕಸಭೆಯ ಮೊದಲ ಅಧಿವೇಶನ ಆರಂಭ

೪. ಆರ್ಚರಿ ವಿಶ್ವಕಪ್: ಚಿನ್ನ ಗೆದ್ದ ಭಾರತದ ಮಹಿಳಾ ಆರ್ಚರಿ ತಂಡ

೫. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಇಂದು ಭಾರತ ಮತ್ತು ಬಾಂಗ್ಲಾದೇಶ ತಂಡಗಳು ಮುಖಾಮುಖಿ

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯ ಹೈದಾರಾಬಾದ್ ಹೌಸ್‌ನಲ್ಲಿಂದು ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ವೇಳೆ ವಿವಿಧ ಕ್ಷೇತ್ರಗಳಲ್ಲಿನ ಒಪ್ಪಂದಗಳಿಗೆ ಸಹಿ ಹಾಕುವ ಜತೆಗೆ ಪರಸ್ಪರ ಸಹಕಾರವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಉಭಯ ನಾಯಕರು ತಮ್ಮ ಬದ್ಧತೆ ಪುನರುಚ್ಚರಿಸಿದರು.  ಡಿಜಿಟಲ್ ಮತ್ತು ಹಸಿರು ಪಾಲುದಾರಿಕೆ, ಕಡಲ ಸಹಕಾರ, ಆರೋಗ್ಯ ಮತ್ತು ಔಷಧ, ಬಾಹ್ಯಾಕಾಶ, ರೈಲ್ವೆ ಸಂಪರ್ಕ, ಸಮುದ್ರ ಶಾಸ್ತ್ರ, ವಿಪತ್ತು ನಿರ್ವಹಣೆ ಮತ್ತು ಮೀನುಗಾರಿಕೆ ಕ್ಷೇತ್ರಗಳಲ್ಲಿ ಭಾರತ ಮತ್ತು ಬಾಂಗ್ಲಾದೇಶ ಪರಸ್ಪರ ಒಪ್ಪಂದಕ್ಕೆ ಸಹಿ ಹಾಕಿವೆ. ನಂತರ ನಡೆದ ಜಂಟಿ ಪತ್ರಿಕಾ ಹೇಳಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಬಾಂಗ್ಲಾದೇಶವು ಭಾರತದ ನೆರೆಹೊರೆ ಮೊದಲು ನೀತಿ, ಆಕ್ಟ್ ಈಸ್ಟ್ ನೀತಿ, ವಿಷನ್ ಸಾಗರ್ ಮತ್ತು ಇಂಡೋ-ಪೆಸಿಫಿಕ್ ವಿಷನ್ ನೀತಿಗಳ ಸಂಗಮದಲ್ಲಿದೆ. ಕಳೆದ ವರ್ಷ ಉಭಯ ರಾಷ್ಟ್ರಗಳು ಒಟ್ಟಾಗಿ ಅನೇಕ ಸಾರ್ವಜನಿಕ ಕಲ್ಯಾಣ ಯೋಜನೆಗಳನ್ನು ಪೂರ್ಣಗೊಳಿಸಿದೆ ಎಂದು ಹೇಳಿದರು. ಬಾಂಗ್ಲಾದೇಶದಲ್ಲಿರುವ ಜನರಿಗೆ ವೈದ್ಯಕೀಯ ಚಿಕಿತ್ಸೆಗಾಗಿ ಭಾರತವು  ಇ-ವೈದ್ಯಕೀಯ ವೀಸಾ ಸೌಲಭ್ಯವನ್ನು ಪ್ರಾರಂಭಿಸಲಿದೆ. ರಂಗ್‌ಪುರದಲ್ಲಿ ನೂತನವಾಗಿ ಸಹಾಯಕ ಹೈಕಮಿಷನ್ ಕಚೇರಿ ತೆರೆಯಲಾಗುವುದು. ಉಭಯ ದೇಶಗಳು ಸಂಪರ್ಕ, ವಾಣಿಜ್ಯ, ಡಿಜಿಟಲ್ ಮತ್ತು ಇಂಧನ ಸಂಪರ್ಕ ಕ್ಷೇತ್ರಗಳ ಮೇಲೆ ಹೆಚ್ಚು ಗಮನ ಹರಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಬಾಂಗ್ಲಾದೇಶ ಪ್ರಧಾನಿ ಶೇಖ್ ಹಸೀನಾ ಮಾತನಾಡಿ, ಭಾರತವು ವಿಶ್ವಾಸಾರ್ಹ ಸ್ನೇಹಿತ ಮತ್ತು ಪ್ರಾದೇಶಿಕ ಪಾಲುದಾರ ರಾಷ್ಟ್ರವಾಗಿದೆ ಎಂದು ಹೇಳಿದರು. ಉಭಯ ದೇಶಗಳ ನಡುವಿನ ಸೌಹಾರ್ದ ಸಂಬಂಧವನ್ನು ಮತ್ತಷ್ಟು ಬಲಪಡಿಸಲು ಬಾಂಗ್ಲಾದೇಶಕ್ಕೆ ಭೇಟಿ ನೀಡುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಇದೇ ವೇಳೆ ಆಹ್ವಾನ ನೀಡಿದರು. ಇದೇ ವೇಳೆ, ಇಂದು ಸಂಜೆ ಶೇಖ್ ಹಸೀನಾ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಇದಕ್ಕೂ ಮುನ್ನ ಶೇಖ್ ಹಸೀನಾ ಅವರಿಗೆ ರಾಷ್ಟ್ರಪತಿ ಭವನದ ಮುಂಭಾಗದಲ್ಲಿ ಔಪಚಾರಿಕವಾಗಿ ಸ್ವಾಗತ ಕೋರಲಾಯಿತು. ನಂತರ ಅವರು ರಾಜ್‌ಘಾಟ್‌ನಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರ ಸ್ಮಾರಕಕ್ಕೆ ಭೇಟಿ ನೀಡಿ, ಗೌರವ ಸಲ್ಲಿಸಿದರು.

**<><*<><>*><>**

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ -ಎನ್‌ಟಿಎ ಯಿಂದ ಪರೀಕ್ಷೆಗಳನ್ನು ಪಾರದರ್ಶಕ, ಸುಗಮ ಮತ್ತು ನ್ಯಾಯಯುತವಾಗಿ ನಡೆಸುವುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಶಿಕ್ಷಣ ಸಚಿವಾಲಯವು ಉನ್ನತ ಮಟ್ಟದ ತಜ್ಞರ ಸಮಿತಿಯನ್ನು ರಚಿಸಿದೆ. ಇಸ್ರೋ ಮಾಜಿ ಅಧ್ಯಕ್ಷ ಡಾ.ಕೆ.ರಾಧಾಕೃಷ್ಣನ್ ಅವರ ಅಧ್ಯಕ್ಷತೆಯಲ್ಲಿ ಏಳು ಸದಸ್ಯರ ಸಮಿತಿಗೆ, ಎನ್‌ಟಿಎಯ ಪರೀಕ್ಷಾ ಪ್ರಕ್ರಿಯೆಯಲ್ಲಿ ದಕ್ಷತೆಯನ್ನು ಹೆಚ್ಚಿಸಲು ಮತ್ತು ಉಲ್ಲಂಘನೆಗಳನ್ನು ತಡೆಯಲು, ಡೇಟಾ ಭದ್ರತಾ ಪ್ರೋಟೋಕಾಲ್‌ಗಳನ್ನು ಸುಧಾರಿಸಲು ಹಾಗೂ ಎನ್‌ಟಿಎ ರಚನೆ ಮತ್ತು ಕಾರ್ಯಚಟುವಟಿಕೆಗಳನ್ನು ಪರಿಶೀಲಿಸಲು, ಸುಧಾರಣೆಗಳನ್ನು ಶಿಫಾರಸು ಮಾಡುವ ಕಾರ್ಯವನ್ನು ವಹಿಸಲಾಗಿದೆ. ಸಮಿತಿಯು ಅಸ್ತಿತ್ವದಲ್ಲಿರುವ ಪ್ರಕ್ರಿಯೆಗಳನ್ನು ಮೌಲ್ಯಮಾಪನ ಮಾಡುತ್ತದೆ, ಸುಧಾರಣೆಗಳನ್ನು ಸೂಚಿಸುತ್ತದೆ. ಜೊತೆಗೆ ಪ್ರಸ್ತುತ ಕುಂದುಕೊರತೆ ಪರಿಹಾರ ಕಾರ್ಯವಿಧಾನಗಳನ್ನು ನಿರ್ಣಯಿಸುತ್ತದೆ ಮತ್ತು ವರ್ಧನೆಗಳನ್ನು ಪ್ರಸ್ತಾಪಿಸುತ್ತದೆ. ಸಮಿತಿಗೆ ತನ್ನ ವರದಿಯನ್ನು ಸಚಿವಾಲಯಕ್ಕೆ ಸಲ್ಲಿಸಲು ಎರಡು ತಿಂಗಳ ಕಾಲಾವಕಾಶ ನೀಡಲಾಗಿದೆ. ದೆಹಲಿಯ ಏಮ್ಸ್ ಮಾಜಿ ನಿರ್ದೇಶಕ ಡಾ.ರಣದೀಪ್ ಗುಲೇರಿಯಾ, ಹೈದರಾಬಾದ್ ಕೇಂದ್ರೀಯ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ.ಬಿ.ಜೆ.ರಾವ್, ಐಐಟಿ ಮದ್ರಾಸ್‌ನ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ರಾಮಮೂರ್ತಿ ಕೆ., ಮತ್ತು ಐಐಟಿ ದೆಹಲಿಯ ಡೀನ್ ಪ್ರೊ. ಆದಿತ್ಯ ಮಿತ್ತಲ್ ಸಮಿತಿಯ ಸದಸ್ಯರಾಗಿದ್ದಾರೆ.

<><*<><>*><>

೧೮ನೇ ಲೋಕಸಭೆಯ ಮೊದಲ ಅಧಿವೇಶನ ಸೋಮವಾರ ಆರಂಭವಾಗಲಿದೆ. ಅಧಿವೇಶನದಲ್ಲಿ ಹೊಸದಾಗಿ ಆಯ್ಕೆಯಾದ ಸಂಸತ್ ಸದಸ್ಯರ ಪ್ರಮಾಣ ವಚನ ನಡೆಯಲಿದೆ. ಹಂಗಾಮಿ ಸ್ಪೀಕರ್ ಆಗಿ ನೇಮಕಗೊಂಡಿರುವ ಬಿಜೆಪಿಯ ಹಿರಿಯ ಸಂಸದ ಭರ್ತೃಹರಿ ಮಹ್ತಾಬ್ ಅವರು ಹೊಸದಾಗಿ ಆಯ್ಕೆಯಾದ ಲೋಕಸಭೆ ಸಂಸದರಿಗೆ ಪ್ರಮಾಣ ವಚನ ಬೋಧಿಸಲಿದ್ದಾರೆ. ನೂತನ ಲೋಕಸಭಾ ಸ್ಪೀಕರ್ ಆಯ್ಕೆ ಇದೇ ೨೬ ರಂದು ನಡೆಯಲಿದ್ದು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇದೇ ೨೭ ರಂದು ಲೋಕಸಭೆ ಮತ್ತು ರಾಜ್ಯಸಭೆಯ ಜಂಟಿ ಸದನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ರಾಜ್ಯಸಭೆಯ ಅಧಿವೇಶನ ಇದೇ ೨೭ರಂದು ಆರಂಭವಾಗಲಿದೆ. ಜುಲೈ ೩ ರಂದು ಸಂಸತ್ ಅಧಿವೇಶನ ಮುಕ್ತಾಯವಾಗಲಿದೆ.

<><*<><>*><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ನವದೆಹಲಿಯಲ್ಲಿಂದು ಎಲ್ಲಾ ರಾಜ್ಯಗಳ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಹಣಕಾಸು ಸಚಿವರೊಂದಿಗೆ ಬಜೆಟ್ ಪೂರ್ವ ಸಭೆ ನಡೆಸಿದರು. ಸಭೆಯಲ್ಲಿ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಹಣಕಾಸು ಕಾರ್ಯದರ್ಶಿ ಟಿ.ವಿ. ಸೋಮನಾಥನ್, ಗೋವಾ, ಮೇಘಾಲಯ, ಮಿಜೋರಾಮ್, ನಾಗಾಲ್ಯಾಂಡ್ ಮತ್ತು ಸಿಕ್ಕಿಂ ರಾಜ್ಯಗಳ ಮುಖ್ಯಮಂತ್ರಿಗಳು, ಬಿಹಾರ, ಮಧ್ಯಪ್ರದೇಶ, ಒಡಿಶಾ, ರಾಜಸ್ಥಾನ ಮತ್ತು ತೆಲಂಗಾಣದ ಉಪ ಮುಖ್ಯಮಂತ್ರಿಗಳು ಸೇರಿದಂತೆ ರಾಜ್ಯಗಳ ಹಣಕಾಸು ಸಚಿವರು ಮತ್ತು ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

<><*<><>*><>

ತಮಿಳುನಾಡಿನ ಕಲ್ಲು ಕುರುಚಿಯಲ್ಲಿ ನಡೆದ ಕಳ್ಳಬಟ್ಟಿ ದುರಂತದಲ್ಲಿ ಮೃತಪಟ್ಟವರ ಸಂಖ್ಯೆ ೫೪ ಕ್ಕೆ ಏರಿಕೆಯಾಗಿದೆ. ಅಸ್ವಸ್ಥಗೊಂಡವರಿಗೆ ಚಿಕಿತ್ಸೆ ಮುಂದುವರಿದಿದೆ. ಇದೇ ವೇಳೆ ಕಳ್ಳಬಟ್ಟಿ ಪ್ರಕರಣಗಳನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಕಠಿಣಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತಕ್ಕೆ ತಮಿಳುನಾಡು ಸರ್ಕಾರ ಕಟ್ಟುನಿಟ್ಟಿನ ಸೂಚನೆ ನೀಡಿದೆ. ತಮಿಳುನಾಡಿನ ವಿಧಾನಸಭೆಯಲ್ಲಿ ಈ ದುರಂತಕ್ಕೆ ಸಂಬಂಧಿಸಿದಂತೆ ಕೂಡಲೇ ಚರ್ಚೆಗೆ ಆಗ್ರಹಿಸಿ, ಎಐಎಡಿಎಂಕೆ ಶಾಸಕರು ಕಲಾಪದಿಂದ ಹೊರ ನಡೆದರು. ಮತ್ತೊಂದೆಡೆ ತಮಿಳುನಾಡಿನ ವಿವಿಧ ಸ್ಥಳಗಳಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ, ಪ್ರತಿಭಟನೆ ನಡೆಸಿತು.

<><*<><>*><>

ಮಹಾರಾಷ್ಟ್ರದ ಮುಂಬೈನಲ್ಲಿ ಇದೇ ೧೫ರಿಂದ ನಡೆಯುತ್ತಿದ್ದ ೧೮ನೇ ಮುಂಬೈ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಸಮಾರೋಪಗೊಂಡಿದೆ. ಈ ಬಾರಿಯ ಚಲನಚಿತ್ರೋತ್ಸವದಲ್ಲಿ ೫೯ ರಾಷ್ಟ್ರಗಳ ೩೧೪ ಚಲನಚಿತ್ರಗಳು

ಪ್ರದರ್ಶನಗೊಂಡವು. ಇದೇ ಮೊದಲ ಬಾರಿಗೆ ಮುಂಬೈ ಮಾತ್ರವಲ್ಲದೆ, ದೆಹಲಿ, ಕೋಲ್ಕತ್ತಾ, ಚೆನ್ನೈ ಮತ್ತು ಪುಣೆಯಲ್ಲಿ ಚಿತ್ರೋತ್ಸವದ ಪ್ರದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಸಮಾರೋಪ ಸಮಾರಂಭದಲ್ಲಿ, ಭಾರತೀಯ ಸಾಕ್ಷ್ಯಚಿತ್ರ ದ ಗೋಲ್ಡನ್ ಫ್ರೆಡ್ಗೆ ಅಂತಾರಾಷ್ಟ್ರೀಯ ವಿಭಾಗದಲ್ಲಿ ಅತ್ಯುತ್ತಮ ಸಾಕ್ಷ್ಯಚಿತ್ರ ಎಂದು ಗೋಲ್ಡನ್ ಕಾಂಚ್ ಪ್ರಶಸ್ತಿಯನ್ನು ನೀಡಲಾಯಿತು ಈ ಸಾಕ್ಷ್ಯಚಿತ್ರದ ನಿರ್ದೇಶಕಿ ನಿಶಿತಾ ಜೈನ್ ಅವರಿಗೆ ಚಿತ್ರನಟಿ ಪೂನಂ ದಿಲ್ಲಾನ್ ಪ್ರಶಸ್ತಿ ನೀಡಿ, ಗೌರವಿಸಿದರು. ಅಮೃತಕಾಲದಲ್ಲಿ ಭಾರತ ಎಂಬ ವಿಶೇಷ ವಿಭಾಗದಡಿ ಲೈಫ್ ಇನ್ ಲೂಮ್ ಕಿರುಚಿತ್ರದ ನಿರ್ದೇಶಕ ಎಡ್ಮಂಡ್ ರ್‍ಯಾನ್‌ಸಾನ್ ಅವರಿಗೆ ಅತ್ಯುತ್ತಮ ಕಿರುಚಿತ್ರ ಪ್ರಶಸ್ತಿ ನೀಡಲಾಯಿತು. ಆಂಡ್ ಟುವರ್ಡ್ಸ್ ಹ್ಯಾಪಿ ಆಲಿಸ್ ಚಿತ್ರದ ನಿರ್ದೇಶನಕ್ಕಾಗಿ ಮೊಯಿ ಸಿಂಗ್ ಅವರು ದಾದಾ ಸಾಹೇಬ್ ಪಾಲ್ಕೆ ಚಿತ್ರನಗರಿ ಪ್ರಶಸ್ತಿಗೆ ಭಾಜನರಾದರು.

<><*<><>*><>

ಕರ್ನಾಟಕ, ಕೇರಳ ಮತ್ತು ಗೋವಾದಲ್ಲಿ ಮುಂದಿನ ೪ ದಿನಗಳ ಕಾಲ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ೪ ದಿನಗಳಲ್ಲಿ ಗುಜರಾತ್, ಮಹಾರಾಷ್ಟ್ರ, ಲಕ್ಷದ್ವೀಪ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು ಮತ್ತು ಪುದುಚೆರಿಯಲ್ಲಿ ಗುಡುಗು ಮಿಂಚು ಸಹಿತ ಸಾಧಾರಣ ಮಳೆಯಾಗಲಿದೆ. ಈಶಾನ್ಯ ಭಾರತದ ನಾಗಾಲ್ಯಾಂಡ್, ಮಣಿಪುರ, ಮಿಝೋರಾಂ ಮತ್ತು ತ್ರಿಪುರಾದಲ್ಲಿ ಹಾಗೂ ಪಶ್ಚಿಮ ಬಂಗಾಳ, ಸಿಕ್ಕಿಂ, ಅಸ್ಸಾಂ, ಮೇಘಾಲಯ ಮತ್ತು ಅರುಣಾಚಲಪ್ರದೇಶದಲ್ಲಿ ಮುಂದಿನ ಐದು ದಿನಗಳ ಕಾಲ ಭಾರೀ ಮಳೆಯಾಗಲಿದೆ. ಏತನ್ಮಧ್ಯೆ, ಪಶ್ಚಿಮ ಉತ್ತರ ಪ್ರದೇಶದ ಕೆಲವೆಡೆ ಇದೇ ೨೪ರ ವರೆಗೆ ಬಿಸಿಗಾಳಿ ಪರಿಸ್ಥಿತಿ ಇರಲಿದ್ದು, ಮುಂದಿನ ಎರಡು ದಿನಗಳಲ್ಲಿ ವಾಯುವ್ಯ ಭಾರತದಲ್ಲಿ ಗರಿಷ್ಠ ತಾಪಮಾನ ೩ ರಿಂದ ೪ ಡಿಗ್ರಿ ಸೆಲ್ಸಿಯಸ್ ಏರಿಕೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><*<><>*><>

ಮಹಾರಾಷ್ಟ್ರದ ರಾಯ್‌ಗಢದ ಧಾರಾವಿ ನದಿಯಲ್ಲಿ ಮುಳುಗಿ ನಾಲ್ವರು ಕಾಲೇಜು ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ. ಮೃತರು ಮುಂಬೈ ನಿವಾಸಿಗಳಾಗಿದ್ದಾರೆ. ೩೭ ವಿದ್ಯಾರ್ಥಿಗಳ ಗುಂಪು ರಾಯ್‌ಗಢ ಜಿಲ್ಲೆಯ ಸೋಂಡೈ ಕೋಟೆಗೆ ಪ್ರವಾಸಕ್ಕೆ ಆಗಮಿಸಿದ್ದರು. ಈ ವೇಳೆ ಧಾರಾವಿ ನದಿಯಲ್ಲಿ ಈಜುಲು ಇಳಿದಿದ್ದಾರೆ. ಈ ಸಂದರ್ಭದಲ್ಲಿ ಒಬ್ಬ ವಿದ್ಯಾರ್ಥಿ ನದಿಯಲ್ಲಿ ಮುಳುಗಿದ್ದಾನೆ. ಅವನನ್ನು ರಕ್ಷಿಸಲು ಪ್ರಯತ್ನಿಸಿದ ಇತರೆ ಮೂವರು ವಿದ್ಯಾರ್ಥಿಗಳೂ ಕೂಡ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ.

<><*<><>*><>

ಟರ್ಕಿಯಲ್ಲಿ ನಡೆದ ಅಂಟಲ್ಯಾ ಆರ್ಚರಿ ವಿಶ್ವಕಪ್-೨೦೨೪ ರ ಕಂಪೌಂಡ್ ಟೀಮ್ ವಿಭಾಗದಲ್ಲಿ ಭಾರತದ ಜ್ಯೋತಿ ಸುರೇಕಾ ವೆನ್ನಂ, ಪ್ರಣೀತ್ ಕೌರ್ ಮತ್ತು ಅದಿತಿ ಸ್ವಾಮಿ ಚಿನ್ನ ಗೆದ್ದಿದ್ದಾರೆ. ಇಂದು ನಡೆದ ಪಂದ್ಯದಲ್ಲಿ ವೆಸ್ಟೋನಿಯಾ ತಂಡವನ್ನು ೨೩೨-೨೨೯ ಅಂಕಗಳಿಂದ ಪರಾಭವಗೊಳಿಸಿದ್ದಾರೆ. ಈ ಗೆಲುವಿನ ಮೂಲಕ ಭಾರತ ತಂಡವು ಈ ಪಂದ್ಯಾವಳಿಯಲ್ಲಿ ಕ್ಲೀನ್ ಸ್ವೀಪ್ ಮಾಡಿತು. ಇದಕ್ಕೂ ಮೊದಲು ಶಾಂಘೈನಲ್ಲಿ ನಡೆದ ವಿಶ್ವಕಪ್-೨೦೨೪ರ ಹಂತ ಒಂದರಲ್ಲಿ ಭಾರತೀಯ ಮಹಿಳಾ ಕಂಪೌಂಡ್ ಆರ್ಚರಿ ತಂಡವು ಇಟಲಿ ತಂಡವನ್ನು ಸೋಲಿಸಿತು. ಎರಡನೇ ಹಂತದಲ್ಲಿ ಯೆಚಿಯಾನ್ ಫೈನಲ್‌ನಲ್ಲಿ ಕೊರಿಯಾ ತಂಡವನ್ನು ಭಾರತ ಪರಾಭವಗೊಳಿಸಿತು.

<><*<><>*><>

ಐಸಿಸಿ ಟಿ-೨೦ ವಿಶ್ವಕಪ್ ಟೂರ್ನಿಯ ಸೂಪರ್ ೮ರ ಸುತ್ತಿನ ಪಂದ್ಯಗಳು ಪ್ರಗತಿಯಲ್ಲಿದ್ದು, ಇಂದು ಆಂಟಿಗುವಾದ ನಾರ್ತ್‌ಸೌಂಡ್‌ನಲ್ಲಿರುವ ವಿವಿಯನ್ ರಿಚರ್ಡ್ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಭಾರತ ಹಾಗೂ ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಇದಕ್ಕೂ ಮುನ್ನ ಇಂದು ಬೆಳಗ್ಗೆ ಕಿಂಗ್‌ಸ್ಟೌನ್‌ನಲ್ಲಿ ನಡೆದ ಪಂದ್ಯದಲ್ಲಿ ಅಮೆರಿಕ ವಿರುದ್ಧ ವೆಸ್ಟ್ ಇಂಡೀಸ್ ತಂಡ ೯ ವಿಕೆಟ್ ಗೆಲುವು ಸಾಧಿಸಿದೆ.

<><*<><>*><>

ಸ್ಪೇನ್‌ನ ಟೌಸ್ಟೆಯಲ್ಲಿಂದು ನಡೆದ ಐಟಿಎಫ್ ಮಹಿಳಾ ವಿಶ್ವ ಟೆನಿಸ್ ಟೂರ್ ಪಂದ್ಯಾವಳಿಯ ಮಹಿಳೆಯ ಡಬಲ್ಸ್ ವಿಭಾಗದಲ್ಲಿ ಭಾರತದ ರುತುಜಾ ಬೋಸ್ಲೆ ಮತ್ತು ಚೀನಾದ ಫಾಂಗ್ರಾನ್ ಟಿಯಾನ್ ಜೋಡಿಯು ಅಗ್ರ ಸ್ಥಾನ ಪಡೆದಿದೆ. ಈ ಜೋಡಿಯು ಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾ ಅಲಾನಾ ಪರ್ನಾಬಿ ಮತ್ತು ಮೆಕ್ಸಿಕೋದ ವಿಕ್ಟೋರಿಯಾ ರೋಡ್ರಿಗಸ್ ಜೋಡಿಯನ್ನು ೬-೨, ೬-೪ ನೇರ ಸೆಟ್‌ಗಳಿಂದ ಪರಾಭವಗೊಳಿಸಿತು.

**<><*<><>*><>**

ಜುಲೈ ೧ ರಂದು ಮಧ್ಯಪ್ರದೇಶದ ಎಲ್ಲಾ ೫೫ ಜಿಲ್ಲೆಗಳಲ್ಲಿ ಪ್ರಧಾನಮಂತ್ರಿ ಕಾಲೇಜ್ ಆಫ್ ಎಕ್ಸಲೆನ್ಸ್ ಉದ್ಘಾಟನೆಗೊಳ್ಳಲಿವೆ. ಉನ್ನತ ಶಿಕ್ಷಣ ಇಲಾಖೆಯ ಚಟುವಟಿಕೆಗಳ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಇಂದು ನಡೆದ ಸಭೆಯಲ್ಲಿ ಮಾಹಿತಿ ನೀಡಿದ ಮಧ್ಯಪ್ರದೇಶ ಮುಖ್ಯಮಂತ್ರಿ ಡಾ.ಮೋಹನ್ ಯಾದವ್, ವಿಮಾಯಾನ, ಕೃಷಿ ಮತ್ತು ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಹೆಚ್ಚುತ್ತಿರುವ ಉದ್ಯೋಗಾವಕಾಶಗಳ ದೃಷ್ಟಿಯಿಂದ ಉತ್ತಮ ಬೋಧನಾ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳುವುದು ಅಗತ್ಯವಿದೆ ಎಂದು ಹೇಳಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**